# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103


ಸಂಖ್ಯೆ :ತುವಿ: ಕಾ.ಅ.ಪ:ಸಂ:2019-20 3013 ದಿನಾಂಕ: 30.10.2019

## ಅಧಿಸೂಚನೆ

ವಿಷಯ : 2019-20ನೇ **ಶೈಕ್ಷಣಿಕ** ಸಾಲಿನಿಂದ ತುಮಕೂರಿನ **ಶ್ರೀ** ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಿಳಾ ಕಾಲೇಜಿಗೆ ಶಾಶ್ವತ ಸಂಯೋಜನೆ ನವೀಕರಣದ ಮಂಜೂರಾತಿ ಕುರಿತು.

ಉಲ್ಲೇಖ : 1. ದಿನಾಂಕ:26.02.2019 ರಂದು ನಡೆದ ವಿದ್ಯಾ ವಿಷಯಕ ಪರಿಷತ್ ನಿರ್ಣಯ.
2. ದಿನಾಂಕ:26.02.2019 ರಂದು ನಡೆದ ಸಿಂಡಿಕೇಟ್ ಸಭೆಯ ನಿರ್ಣಯ.
3. ಸರ್ಕಾರದ ಪತ್ರ ಸಂಖ್ಯೆ:ಇಡಿ 22 ಯುಆಐ 2019 ದಿನಾಂಕ: 17.10.2019
4. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ: 28.10.2019

...

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ - 2000 ರ 62ನೇ ಪ್ರಕರಣದ (3)ನೇ ಉಪಪ್ರಕರಣದಡಿ ಪ್ರದತ್ತವಾದ ಅಧಿಕಾರದನ್ವಯ ತುಮಕೂರು ವಿಶ್ವವಿದ್ಯಾನಿಲಯವು **ತುಮಕೂರಿನ ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಿಳಾ ಕಾಲೇಜಿಗೆ ಉಲ್ಲೇಖ** (3) ರ **ಸರ್ಕಾರದ ಆದೇಶದಂತೆ 2019-20ನೇ ಶೈಕ್ಷಣಿಕ ಸಾಲಿನಿಂದ** ಜಾರಿಗೆ ಬರುವಂತೆ ಈ ಕೆಳಕಂಡ ಸ್ನಾತಕ ಪದವಿ ಕೋರ್ಸುಗಳಿಗೆ ನಮೂದಿಸಿರುವ ವಿದ್ಯಾರ್ಥಿ ಪ್ರಮಾಣದೊಂದಿಗೆ **ನಾಲ್ಕು** (04) **ವರ್ಷಗಳ ಅವಧಿಗೆ** ಕೆಳಕಂಡ ಷರತ್ತುಗಳಿಗೊಳಪಟ್ಟು ಶಾಶ್ವತ ಸಂಯೋಜನೆ ನವೀಕರಣಕ್ಕೆ ಮಂಜೂರಾತಿ ನೀಡಲಾಗಿದೆ.

| ಕೋರ್ಸು | ವಿಷಯ ಸಮೂಹ / ಐಚ್ಛಿಕ ವಿಷಯಗಳು | ವಿದ್ಯಾರ್ಥಿ ಪ್ರಮಾಣ |
|---|---|---|
| ಬಿ.ಎ. | ಇತಿಹಾಸ, ಅರ್ಥಶಾಸ್ತ್ರ ಮತ್ತು ರಾಜ್ಯಶಾಸ್ತ್ರ | 100 (ಒಂದು ನೂರು) |
| | ಇತಿಹಾಸ, ಅರ್ಥಶಾಸ್ತ್ರ ಮತ್ತು ಇಂಗ್ಲೀಷ್ | 100 (ಒಂದು ನೂರು) |
| | ಇತಿಹಾಸ, ಅರ್ಥಶಾಸ್ತ್ರ ಮತ್ತು ಸಮಾಜಶಾಸ್ತ್ರ | 40 (ನಲವತ್ತು) |
| | ಸಮಾಜಶಾಸ್ತ್ರ, ಅರ್ಥಶಾಸ್ತ್ರ ಮತ್ತು ರಾಜ್ಯಶಾಸ್ತ್ರ | 100 (ಒಂದು ನೂರು) |
| | ಇತಿಹಾಸ, ಅರ್ಥಶಾಸ್ತ್ರ ಮತ್ತು ಕನ್ನಡ | 100 (ಒಂದು ನೂರು) |
| | ಇತಿಹಾಸ, ಅರ್ಥಶಾಸ್ತ್ರ ಮತ್ತು ಗಣಕವಿಜ್ಞಾನ | 60 (ಅರವತ್ತು) |
| ಬಿ.ಎಸ್ಸಿ. | ಭೌತಶಾಸ್ತ್ರ, ರಸಾಯನಶಾಸ್ತ್ರ ಮತ್ತು ಗಣಿತಶಾಸ್ತ್ರ | 102 ( ಒಂದು ನೂರ ಎರಡು) |
| | ಭೌತಶಾಸ್ತ್ರ, ಗಣಿತಶಾಸ್ತ್ರ ಮತ್ತು ಗಣಕ ವಿಜ್ಞಾನ | 60 (ಅರವತ್ತು) |
| | ಭೌತಶಾಸ್ತ್ರ, ಗಣಿತಶಾಸ್ತ್ರ ಮತ್ತು ವಿದ್ಯುನ್ಮಾನ | 60 (ಅರವತ್ತು) |
| | ರಸಾಯನಶಾಸ್ತ್ರ, ಪ್ರಾಣಿಶಾಸ್ತ್ರ ಮತ್ತು ಸೂಕ್ಷ್ಮಜೀವಶಾಸ್ತ್ರ | 40 (ನಲವತ್ತು) |
| | ರಸಾಯನಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಪ್ರಾಣಿಶಾಸ್ತ್ರ | 72 (ಎಪ್ಪತ್ತೆರಡು) |
| | ರಸಾಯನಶಾಸ್ತ್ರ, ಸಸ್ಯಶಾಸ್ತ್ರ ಮತ್ತು ಜೈವಿಕ ತಂತ್ರಜ್ಞಾನ | 40 (ನಲವತ್ತು) |
| | ಗಣಿತಶಾಸ್ತ್ರ, ವಿದ್ಯುನ್ಮಾನ ಮತ್ತು ಗಣಕ ವಿಜ್ಞಾನ | 60 (ಅರವತ್ತು) |
| ಬಿ.ಕಾಂ. | ವಿಶ್ವವಿದ್ಯಾನಿಲಯದ ವಿನಿಯಮದಂತೆ | 210 (ಎರಡು ನೂರ ಹತ್ತು) |

150/19-20 7/11/19

ಷರತ್ತುಗಳು :

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಕಾಲೇಜಿನ ಮೇಲ್ಕಂಡ ಕೋರ್ಸ್‌ಗೆ ಸರ್ಕಾರವು ಯಾವುದೇ ಅನುದಾನವನ್ನು ಮಂಜೂರು ಮಾಡುವುದಿಲ್ಲ. ಅದನ್ನು ಶಾಶ್ವತ ಅನುದಾನ-ರಹಿತ ಕೋರ್ಸೆಂದು ಪರಿಗಣಿಸತಕ್ಕದ್ದು.
2. ಮೇಲ್ಕಂಡ ಕಾಲೇಜು ವಿಶ್ವವಿದ್ಯಾನಿಲಯದ ನಿಯಮಾವಳಿಗಳ ಉಪಬಂಧಗಳನ್ನು ತಪ್ಪದೇ ಪಾಲಿಸತಕ್ಕದ್ದು.
3. ನಿಗದಿತ ವಿದ್ಯಾರ್ಥಿ ಪ್ರಮಾಣಕ್ಕಿಂತ ಹೆಚ್ಚುವರಿಯಾಗಿ ವಿದ್ಯಾರ್ಥಿಗಳ ಪ್ರವೇಶ ಮಾಡತಕ್ಕದ್ದಲ್ಲ.
4. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾನಿಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.

5. ಸ್ಥಳೀಯ ವಿಚಾರಣಾ ಸಮಿತಿ ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
6. ಕಾಲೇಜು / ಆಡಳಿತ ಮಂಡಳಿಯು ಶೇ.50% ರಷ್ಟು ವಿಶ್ವವಿದ್ಯಾನಿಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾನಿಲಯದ ನಿಯಮಾವಳಿಯ ಪ್ರಕಾರ ನಿಗದಿಪಡಿಸತಕ್ಕದ್ದು ; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾನಿಲಯವು ನಿಗದಿಪಡಿಸಿರುವ ಶುಲ್ಕವನ್ನು ಮಾತ್ರ ವಸೂಲು ಮಾಡತಕ್ಕದ್ದು, ವಿಶ್ವವಿದ್ಯಾನಿಲಯವು ನಿಗದಿಪಡಿಸಿದ ಶುಲ್ಕ / ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
7. ದಿನಾಂಕ : 13.08.1997 ರಂದು ವಿಶಾಖ V/s ರಾಜಸ್ತಾನ ಸರ್ಕಾರ ಮೊಕದ್ದಮ್ಮೆಯಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ತೀರ್ಪಿನನುಸಾರ ಯಾವುದೇ ವ್ಯಕ್ತಿ / ವಿದ್ಯಾರ್ಥಿಯು ಗಲಭೆಯನ್ನು ಉಂಟು ಮಾಡುವುದಾಗಲೀ ಅಥವಾ ಕಾಲೇಜಿನಲ್ಲಿ ಮಹಿಳೆಯರ ಮೇಲೆ ಲೈಂಗಿಕ ಕಿರುಕುಳ ನೀಡುವುದಾಗಲಿ ಮಾಡಿದಲ್ಲಿ ಅದು ಸಂಜ್ಞೇಯ ಅಪರಾಧ (Cognizable offence) ಎಂದು ಪರಿಗಣಿಸಿ, ಈ ತರಹದ ಚಟುವಟಿಕೆಗಳಲ್ಲಿ ತೊಡಗಿದ ವಿದ್ಯಾರ್ಥಿ / ವ್ಯಕ್ತಿಯ ಪ್ರವೇಶವನ್ನು ರದ್ದುಪಡಿಸುವುದು, ಮತ್ತು ಆ ವ್ಯಕ್ತಿ / ವಿದ್ಯಾರ್ಥಿಯ ಮೇಲೆ ಕಾನೂನು ರೀತ್ಯಾ ಕ್ರಮ ಜರುಗಿಸತಕ್ಕದ್ದು; ಮುಂದುವರೆದು, ಕಾಲೇಜು / ಆಡಳಿತ ಮಂಡಳಿಯು ಸುಪ್ರೀಂ ಕೋರ್ಟಿನ ಆದೇಶದನ್ವಯ ಒಂದು ದೂರು ಸಮಿತಿಯನ್ನು ರಚಿಸಿ; ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.
8. ಕಾಲೇಜು ವಿದ್ಯಾರ್ಥಿಗಳ ಬೆಳವಣಿಗೆಗಾಗಿ ಕೋರ್ಸನ್ನು ಉತ್ತಮವಾಗಿ ನಡೆಸತಕ್ಕದ್ದು; ಕಾಲೇಜಿನ ಪ್ರಾಂಶುಪಾಲರು / ಆಡಳಿತ ಮಂಡಳಿಯು ವಿದ್ಯಾರ್ಥಿ / ಬೋಧಕ ವೃಂದವನ್ನು ಸೌಹಾರ್ದಯುತವಾಗಿ ಕಾಣತಕ್ಕದ್ದು.
9. ಕಾಲೇಜಿನ ಆಡಳಿತ ಮಂಡಳಿಯು ಯಾವುದೇ ವಿದ್ಯಾರ್ಥಿಯ ಅಂಕಪಟ್ಟಿ ಅಥವಾ ಇತರೆ ದಾಖಲಾತಿಗಳನ್ನು ಸದರಿ ವಿದ್ಯಾರ್ಥಿಯ ಪ್ರವೇಶವನ್ನು ವಿಶ್ವವಿದ್ಯಾನಿಲಯವು ಅನುಮೋದಿಸುವವರೆಗೆ ಅಥವಾ 6 ತಿಂಗಳ ಅವಧಿಗೆ, ಇವೆರಡರಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ, ಮಾತ್ರ ಅನಗತ್ಯವಾಗಿ ತಡೆಹಿಡಿಯತಕ್ಕದ್ದಲ್ಲ.
10. ಕಾಲೇಜಿನ ಆಡಳಿತ ಮಂಡಳಿಯ ಯಾವುದೇ ವಿದ್ಯಾರ್ಥಿಯು ವರ್ಗಾವಣೆ ಪ್ರಮಾಣ ಪತ್ರಬೇಕೆಂದು ಅಪೇಕ್ಷಿಸಿ ಅರ್ಜಿ ಸಲ್ಲಿಸಿದಲ್ಲಿ ಅದನ್ನು ವಿತರಿಸುವಾಗ ವಿದ್ಯಾರ್ಥಿಗೆ ತೊಂದರೆ ನೀಡತಕ್ಕದ್ದಲ್ಲ; ಹಾಗೂ ಅವರಿಂದ ಬಾಕಿ ಉಳಿದಿರುವ ಶೈಕ್ಷಣಿಕ ವರ್ಷ / ಸೆಮಿಸ್ಟರ್ ಅವಧಿಗೆ ಮಾತ್ರ ಬೋಧಕ ಶುಲ್ಕವನ್ನು ಪಡೆಯತಕ್ಕದ್ದು. ಹಾಗೂ ಬೇರೆ ಯಾವುದೇ ಮೊತ್ತವನ್ನು ಪಡೆಯತಕ್ಕದ್ದಲ್ಲ.
11. ಕ್ಯಾಪಿಟೇಷನ್ ಶುಲ್ಕವನ್ನು ಯಾವುದೇ ರೂಪದಲ್ಲಿ ಪಡೆಯತಕ್ಕದ್ದಲ್ಲ.
12. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ

ಗೆ,

ಪ್ರಾಂಶುಪಾಲರು, ಶ್ರೀ ಸಿದ್ಧಗಂಗಾ ಕಲಾ, ವಿಜ್ಞಾನ ಮತ್ತು ವಾಣಿಜ್ಯ ಮಹಿಳಾ ಕಾಲೇಜು, ಬಿ.ಹೆಚ್.ರಸ್ತೆ,
ತುಮಕೂರು – 572 102

ಪ್ರತಿಗಳು :

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಡಾ. ಬಿ.ಆರ್. ಅಂಬೇಡ್ಕರ್ ವೀಧಿ, ಬೆಂಗಳೂರು-1.
2. ಆಯುಕ್ತರು / ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಬೆಂಗಳೂರು-1.
3. ಕುಲಸಚಿವರು(ಮೌಲ್ಯಮಾಪನ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಯವರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
5. ಉಪಕುಲಸಚಿವರು (ಶೈಕ್ಷಣಿಕ ವಿಭಾಗ), ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
6. ಕಛೇರಿ ಪ್ರತಿ.

True Translated copy.

# TUMKUR UNIVERSITY

University Office B.H. Road, Tumkur -572103

No: TU:C.A.PA:No: 2019-20/3013 Dated:30.10.2019

## Notification

Sub: Regarding sanction of permanent combination renewal of Sree Siddaganga College of Arts, Science & Commerce for Women, Tumkur.

Ref: 1. Declaration of Vidya Vishaya panshath on 26-02-2019
2. Decision at the syndicate meeting on 26-02-2019
3. As per the letter of government No: ED 22 UTI 2019 on 17-10-2019
4. Approval by the Vice-Chancellor on 28-10-2019

***

As per the notification of Karnataka State University act 2000 under 62nd case (3) subcase according to the application of the predominant authority. Sree Siddaganga College of Arts, Science & Commerce for Women, under the reference No. 03 orders from the government has been sanctioned the permanent combinations renewals for 4 years that is 2019-20 to the next 04 years applying the conditions mentioned below.

| Course | Subject | Students Strength |
|---|---|---|
| BA | History, Economics & Political Science | 100 (one Hundred) |
| | History, Economics & English | 100 (one Hundred) |
| | History, Economics & Sociology | 40 (Forty) |
| | Sociology, Economics & Political Science | 100 (one Hundred) |
| | History, Economics & Kannada | 100 (one Hundred) |
| | History, Economics & Computer Science | 60 (Sixty) |
| BSc | Physics, Chemistry & Mathematics | 102 (One Hundereden Two) |
| | Physics,Mathematics & Computer Science | 60 (Sixty) |
| | Physics,Mathematics & Electronics | 60 (Sixty) |
| | Chemistry,Zooligy & Micro Biology | 40 (Forty) |
| | Chemistry,Botany & Zoology | 72 (Seventy Two) |
| | Chemistry,Botany & Bio Technology | 40 (Forty) |
| | Mathematics, Electronics & Computer Science | 60 (Sixty) |
| BCom | As per the University regulations | 210 (Two Hundred Ten) |

## Conditions:

1. College will not be sanctioned any grants from the Government for running the above mentioned courses.
2. The college shall abide to follow the regulations of the Tumkur University.
3. The College should limit the student strength as mentioned above.
4. The College is subject to follow the rules, regulations imposed under the per view of Tumkur University without fail.